					ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ತುಂಬಲು ಕ್ರಮ ಕೈಗೊಳ್ಳಲಾಗಿದೆ.
7)	ವಸತಿ / ಆಶ್ರಮ ಶಾಲಾ ಶಿಕ್ಷಕರು	22	02	20	2007–08ನೇ ಸಾಲಿನಿಂದ ಖಾಲಿ ಇದ್ದು ಹೊರ ಸಂಪನ್ಮೂಲ ಮುಖೇನ ಸೇವೆ ಪಡೆಯಲಾಗಿದೆ.
8)	ಅಡುಗೆಯವರು	30	11	19	2003–04ನೇ ಸಾಲಿನಿಂದ ಖಾಲಿ ಇದ್ದು ಹೊರ ಸಂಪನ್ಮೂಲ ಮುಖೇನ ಸೇವೆ ಪಡೆಯಲಾಗಿದೆ
9)	ಅಡುಗೆ ಸಹಾಯಕರು	19	08	11	
10)	ರಾತ್ರಿ ಕಾವಲುಗಾರರು	06	01	05	
11)	ಸಿಪಾಯಿ / ಸ್ವಚ್ಛತಾ ಸಿಬ್ಬಂದಿ	03	01	02	
	ಒಟ್ಟು	**99**	**34**	**65**	

ಇ) ಖಾಲಿ ಇರುವ 'ಸಿ' ವೃಂದದ ಹುದ್ದೆಗಳನ್ನು ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ನೇರ ನೇಮಕಾತಿ ಹಾಗೂ ಮುಂಬಡ್ತಿ ಮುಖೇನ ಭರ್ತಿ ಮಾಡಲು ಶೀಘ್ರ ಕ್ರಮ ಕೈಗೊಳ್ಳಲಾಗುವುದು.

ಫಲಾನುಭವಿಗಳ ವಿವರ

860 (1141) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞನಗರ) : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಎಷ್ಟು ಫಲಾನುಭವಿಗಳಿಗೆ ತರಬೇತಿ ನೀಡಲಾಗಿರುತ್ತದೆ;

ಆ) ನೀಡಲಾಗಿದ್ದಲ್ಲಿ, ಅನುದಾನ ಮತ್ತು ಸಾಲ ಮಂಜೂರಾತಿ ಮಾಡಲಾಗಿದೆಯೇ;

ಇ) ಇದ್ದಲ್ಲಿ, ಫಲಾನುಭವಿಗಳು ಯಾರು ಯಾರು; ವಿವರ ನೀಡುವುದು?

ಶ್ರೀ ಪ್ರೊ.ಡಾ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಯಾವುದೇ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಭಾಗ್ಯಲಕ್ಷ್ಮಿ ಯೋಜನೆಯ ಫಲಾನುಭವಿಗಳು

861 (1142) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞ ನಗರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಸರ್ಕಾರದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಗಿದೆ;

ಆ) ಇದ್ದಲ್ಲಿ, ಹೆಸರು ಮತ್ತು ವಿವರ ನೀಡುವುದು;

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಸರ್ಕಾರದ ವತಿಯಿಂದ 587 ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಗಿದೆ.

ಆ) ವಿವರಗಳನ್ನು ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಒದಗಿಸ ಲಾಗುವುದು.